# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:100 RNI NO.KAR KAN/2003/10452:No./PMG/KA/NK/BM/743/24-26 ಮಂಗಳವಾರ ದಿನಾಂಕ: 12–03–2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–ಜಿಲ್ಲಾ ಮಟ್ಟದ ಅನುಷ್ಠಾನ ಸಭೆ

## ನಾಮಫಲಕಗಳ ಮೇಲ್ಭಾಗದಲ್ಲಿ ಶೇ.60 ಕನ್ನಡ ಬಳಕೆ ಕಡ್ಡಾಯ:ಜಿಲ್ಲಾಧಿಕಾರಿ



ಬೆಳಗಾವಿ,ಮಾ.11–: ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–2022 ಸಮರ್ಪಕವಾಗಿ ಜಾರಿಗೊಳಿಸುವುದರ ಜತೆಗೆ ಜಿಲ್ಲೆಯ ಪ್ರತಿಯೊಂದು ಅಂಗಡಿ–ಮುಂಗಟ್ಟುಗಳ ನಾಮ ಫಲಕಗಳ ಮೇಲ್ಭಾಗದಲ್ಲಿ ಕಡ್ಡಾಯವಾಗಿ ಶೇ.60 ರಷ್ಟು ಕನ್ನಡ ಬಳಕೆಯಾಗಿರುವಂತೆ ಅಧಿಕಾರಿಗಳು ಕ್ರಮ ತೆಗೆದು ಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸೋಮವಾರ(ಮಾ.11) ನಡೆದ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೆಯಕ–2022 ಅನುಷ್ಠಾನ ಕುರಿತು ಹಾಗೂ ನಾಮಫಲಕದಲ್ಲಿ ಕನ್ನಡ ಭಾಷೆಯ ಬಳಕರ ಕುರಿತು ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರಕಾರ ಜಾರಿಗೆ ತಂದಿರುವ ವಿಧೇಯಕದ ಅನುಸಾರ ನಾಮಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಶೇ.60 ಹಾಗೂ ಇತರೆ ಭಾಷೆ ಶೇ.40 ರ ಅನುಪಾತದಲ್ಲಿ ಇರಬೇಕು. ಜಿಲ್ಲೆಯಲ್ಲಿರುವ ಎಲ್ಲ ಕಚೇರಿಗಳು,ಅಂಗಡಿ–ಮುಂಗಟ್ಟುಗಳ ನಾಮ ಫಲಕಗಳ ಮೇಲ್ಭಾಗದಲ್ಲಿ ಕನ್ನಡ ಭಾಷೆ ಇರಬೇಕು. ಮಾರ್ಚ್ 13 ರ ಒಳಗಾಗಿ ಈ ಆದೇಶವನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕು.

ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿಗಳು; ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಾಗೂ ಬೆಳಗಾವಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕವನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು. ಕೆಲವು ಕಡೆಗಳಲ್ಲಿ ಕನ್ನಡ ಹಾಗೂ ಇತರೆ ಭಾಷೆಗಳು ಶೇ.50:50 ಅನುಪಾತದಲ್ಲಿರುವುದು ಕಂಡುಬಂದಿರುತ್ತದೆ. ಇಂತಹ ನಾಮಫಲಕಗಳನ್ನು ಕೂಡ ತಕ್ಷಣವೇ ಬದಲಾಯಿಸಿ ನಿಯಮಾನುಸಾರ ಶೇ.60:40 ರ ಪ್ರಮಾಣದಲ್ಲಿರುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ತಿಳಿಸಿದರು.

ಬೆಳಗಾವಿ ಗಡಿ ಜಿಲ್ಲೆಯಾಗಿರುವುದರಿಂದ ಬೆಳಗಾವಿ ನಗರ ಹಾಗೂ ಗಡಿಪ್ರದೇಶಗಳಲ್ಲಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಕಟ್ಟುನಿಟ್ಟಾಗಿ ನಿಯಮಾನುಸಾರ ಕ್ರಮವನ್ನು ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಸಭೆಯನ್ನು ನಿರ್ವಹಿಸಿದರು.

ಉಪ ಪೊಲೀಸ್ ಆಯುಕ್ತರಾದ ಪಿ.ವಿ.ಸ್ನೇಹಾ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಪಿ.ಎನ್.ಲೋಕೇಶ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ ಕಲಾದಗಿ, ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ರೇಖಾ ಡೊಳ್ಳಿನವರ, ಬೈಲಹೊಂಗಲ ಉಪ ವಿಭಾಗಾಧಿಕಾರಿ ಪ್ರಭಾವತಿ ಫಕೀರಪುರ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

## ಬರ ನಿರ್ವಹಣೆ: ಕುಡಿಯುವ ನೀರಿನ ಪೂರೈಕೆಯಲ್ಲಿ ಕೊರತೆ ಆಗದಂತೆ ನಿಗಾವಹಿಸಿ

ಬೆಳಗಾವಿ,ಮಾ.11 –: ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ತಾಪಮಾನದಿಂದಾಗಿ ಬರಗಾಲದ ಛಾಯೆ ವ್ಯಾಪಿಸಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೊರತೆ ಆಗದಂತೆ ನಿಗಾವಹಿಸಲು ಜಿಲ್ಲಾಧಿಕಾರಿ ನಿತೀಶ ಪಾಟೀಲ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ (ಮಾ.11) ರಂದು ಜರುಗಿದ ಬರ ನಿರ್ವಹಣೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಯಾವುದೇ ಕಾರಣಕ್ಕೂ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಆಗದಂತೆ ನಿಗಾವಹಿಸಬೇಕು.

ಎಲ್ಲಿ ಅಗತ್ಯವಿದೆಯೋ ಅಂತಹ ಕಡೆಗಳಲ್ಲಿ ತಕ್ಷಣವೇ ನೀರು ಪೂರೈಸಬೇಕು. ಅಗತ್ಯ ಬಿದ್ದಲ್ಲಿ ಖಾಸಗಿ ಬೊರವೆಲಗಳ ಮೂಲಕ ನೀರು ಪೂರೈಕೆಗೆ ಕ್ರಮ ವಹಿಸಿಲು ತಿಳಿಸಿದರು.

ಟ್ಯಾಂಕರುಗಳ ಮೂಲಕ ನೀರು ಸರಬರಾಜು ಮಾಡುವಲ್ಲಿ ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಸಮರ್ಪಕ ನೀರು ಪೂರೈಕೆಗೆ ಕ್ರಮ ವಹಿಸಬೇಕು. ಟ್ಯಾಂಕರ ಮೂಲಕ ನೀರು ಸರಬರಾಜು ಮಾಡಿದ್ದರ ಮಾಹಿತಿಯನ್ನು ತಂತ್ರಾಂಶದಲ್ಲಿ ದಾಖಲಿಸಲು ಕ್ರಮ ವಹಿಸಬೇಕು.

ತಾಲೂಕುಗಳಲ್ಲಿ ತಹಶಿಲ್ದಾರರ ಪಾತ್ರ ಅತೀ ಪ್ರಮುಖವಾಗಿದ್ದು ಬರ ನಿರ್ವಹಣೆಯಲ್ಲಿ ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸುವಂತೆ ತಿಳಿಸಿದರು. ತಮ್ಮ ತಾಲ್ಲೂಕು ವ್ಯಾಪ್ತಿಯ ಗ್ರಾಮಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಜತೆ ಸಮನ್ವಯ ಸಭೆ ನಡೆಸುವ ಮೂಲಕ ಕುಡಿಯುವ ನೀರು ಹಾಗೂ ಮೇವಿನ ಕೊರತೆಯ ಬಗ್ಗೆ ಖಚಿತ ಮಾಹಿತಿಯನ್ನು ಪಡೆದುಕೊಂಡು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.

ಮುಖ್ಯವಾಗಿ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ನಿಗಾವಹಿಸಿ ಈ ಕುರಿತು ಯಾವುದೇ ದೂರುಗಳು ಬಾರದಂತೆ ನಿಗಾವಹಿಸುವಂತೆ ಕಟ್ಟುನಿಟ್ಟಿನ ಸೂಚನೇ ನೀಡಿದರು. ಜಿಲ್ಲೆಯಲ್ಲಿ ಸಧ್ಯ ಮೇವಿನ ಕೊರತೆ ಇರುವುದಿಲ್ಲ ಜಾನುವಾರುಗಳಿಗೆ ಮೇವಿನ ಕೊರತೆ ಆಗದಂತೆ ನಿಗಾವಹಿಸಬೇಕು. ಮೇವು ಬೇಡಿಕೆ ಇರುವ ಕಡೆಗಳಲ್ಲಿ ಸ್ಥಳೀಯ ಬೇಡಿಕೆಯ ಅನುಸಾರ ಪಶುಪಾಲನಾ ಇಲಾಖೆಯ ಅಧಿಕಾರಿಗಳ ವರದಿ ಆಧರಿಸಿ ಮೇವು ಪೂರೈಕೆ ಮಾಡಬೇಕು ಎಂದು ತಹಶೀಲ್ದಾರರಿಗೆ ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಸೇರಿದಂತೆ ವಿವಿಧ ತಾಲೂಕುಗಳ ತಹಶಿಲ್ದಾರರು ಉಪಸ್ಥಿತರಿದ್ದರು.

## ಮಾ. 12 ರಂದು ಮುಕ್ತಿಮಠದಲ್ಲಿ ಗ್ಯಾರಂಟಿ ಯೋಜನೆಗಳ ಸಮಾವೇಶ

ಬೆಳಗಾವಿ,ಮಾ.11 –: ಯಮಕನಮರಡಿ ಮತಕ್ಷೇತ್ರದ 5 ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಮಾ. 12 (ಮಂಗಳವಾರ) ದಂದು ಮುಕ್ತಿಮಠ, ಭೂತರಾಮನಟ್ಟಿಯಲ್ಲಿ ಬೆಳಿಗ್ಗೆ 10 ಗಂಟೆಗೆ ನಿಗದಿಪಡಿಸಲಾಗಿದೆ. ಸದರಿ ಸಮಾವೇಶವು ಸನ್ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರ ಅಧ್ಯಕ್ಷತೆಯಲ್ಲಿ ಜರುಗಲಿದೆ ಎಂದು ಬೆಳಗಾವಿ ತಹಶೀಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ಯಾರಂಟಿ ಯೋಜನೆಗಳು–ಕರ್ನಾಟಕ ಜನತೆಯ ಸಂಜೀವಿನಿ– ಸಚಿವ ಬಿ.ನಾಗೇಂದ್ರ



ಬಳ್ಳಾರಿ,ಮಾ–: ರಾಜ್ಯದ ಜನತೆಯ ಅಭೂತಪೂರ್ವ ಆಶೀರ್ವಾದದಿಂದ ಆಡಳಿತಕ್ಕೆ ಬಂದ ನಮ್ಮ ಸರ್ಕಾರವು ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳು ರಾಜ್ಯದ ಜನತೆಯ ಸಂಜೀವಿನಿಯಾಗಿವೆ ಎಂದು ಯುವ ಸಬಲೀಕರಣ, ಕ್ರೀಡಾ, ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಇವರ ಸಂಯುಕ್ತಾಶ್ರಯದಲ್ಲಿ ನಗರದ ಮೋಕಾ ರಸ್ತೆಯ ಸುವರ್ಣ ಇಂಟರ್ ನ್ಯಾಷನಲ್ ಸ್ಕೂಲ್ ಮೈದಾನದಲ್ಲಿ ಸೋಮವಾರ ಏರ್ಪಡಿಸಿದ್ದ 'ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚುನಾವಣೆ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ, ಐದಕ್ಕೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ, ನಮ್ಮ ಸರ್ಕಾರವು ನುಡಿದಂತೆ ನಡೆದಿದೆ. ಈಗ ದೇಶವೇ ನಮ್ಮ ರಾಜ್ಯದತ್ತ ನೋಡುತ್ತಿದ್ದು, ಇತರೆ ರಾಜ್ಯಗಳಿಗೆ ನಮ್ಮ ಸರ್ಕಾರವು ಮಾದರಿಯಾಗಿದೆ. ನಮ್ಮ ಸರ್ಕಾರದಂತೆಯೇ ಅಲ್ಲಿಯೂ ಗ್ಯಾರಂಟಿ ಯೋಜನೆಗಳನ್ನು ನೀಡುತ್ತಿದ್ದಾರೆ ಎಂದು ತಿಳಿಸಿದರು.

ಮಹಿಳೆಯರನ್ನು ಸಶಕ್ತರನ್ನಾಗಿ ಮಾಡಲು ಈ ಯೋಜನೆಗಳನ್ನು ರೂಪಿಸಿದ್ದು, ತಾಯಂದಿರು, ಅಕ್ಕ ತಂಗಿಯರು ಗ್ಯಾರಂಟಿ ಯೋಜನೆಗಳಿಂದ ಬಹಳ ಸಂತುಷ್ಟರಾಗಿದ್ದು, 'ಕೆರೆಯ ನೀರನ್ನು ಕೆರೆಗೆ ಚೆಲ್ಲಿ' ಎನ್ನುವಂತೆ ರಾಜ್ಯದ ಜನತೆಯ ತೆರಿಗೆ ಹಣವನ್ನು ರಾಜ್ಯದ ಜನತೆಯ ಅಭಿವೃದ್ಧಿಗೆ ವಿನಿಯೋಗಿಸಲಾಗುತ್ತಿದೆಯೇ ಹೊರತು, ರಾಜ್ಯ ಸರ್ಕಾರದ ಯಾವುದೇ ಸ್ವಹಿತಾಸಕ್ತಿ ಇಲ್ಲ ಎಂದು ಮನದಟ್ಟು ಮಾಡಿದರು.

ಜನಪರ ಕಾಳಜಿಯಿರುವ ಯೋಜನೆಗಳನ್ನೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ಜಾರಿಗೊಳಿಸಿದ್ದಾರೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರವು 5 ವರ್ಷಗಳ ಕಾಲ ಸುಭದ್ರವಾಗಿರುತ್ತದೆ. ನಮ್ಮ ಸರ್ಕಾರವು ಇರುವವರೆಗೂ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸಲಾಗುವುದಿಲ್ಲ ಎಂದು ಸಚಿವ ಬಿ.ನಾಗೇಂದ್ರ ಅವರು ಹೇಳಿದರು.

ಜಿಲ್ಲೆಯಲ್ಲಿ ಮಾಹಿತಿ ಕೊರತೆಯಿಂದ ಗ್ಯಾರಂಟಿ ಯೋಜನೆಗಳಿಂದ ವಂಚಿತರಾದ ಪ್ರತಿ ಫಲಾನುಭವಿಗಳ ಮನೆಗೆ ಭೇಟಿ ನಡೆಸಬೇಕು. ತಿಂಗಳೊಳಗಾಗಿ ಅವರ ಸಮಸ್ಯೆಗಳನ್ನು ಕಂಡುಕೊಂಡು ಪರಿಹಾರ ಒದಗಿಸಬೇಕು ಎಂದು ಸಚಿವ ಬಿ.ನಾಗೇಂದ್ರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗ್ಯಾರಂಟಿ ಯೋಜನೆಗಳಿಗಾಗಿ ಬಳ್ಳಾರಿ ಜಿಲ್ಲೆಯಲ್ಲಿ ವೆಚ್ಚ ಮಾಡಿದ ಒಟ್ಟು ಮೊತ್ತ:* ಬಳ್ಳಾರಿ ಜಿಲ್ಲೆಯಲ್ಲಿ ಐದು ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಗೆ ಒಟ್ಟು 566.53 ಕೋಟಿ ರೂ. ವೆಚ್ಚ ಮಾಡಲಾಗಿದೆ. ಶಕ್ತಿ ಯೋಜನೆಗೆ 65.62 ಕೋಟಿ ರೂ., ಗೃಹಲಕ್ಷ್ಮಿ ಯೋಜನೆಗೆ 301.84 ಕೋಟಿ ರೂ., ಅನ್ನಭಾಗ್ಯ ಯೋಜನೆಗೆ 111.92 ಕೋಟಿ ರೂ., ಗೃಹಜ್ಯೋತಿ ಯೋಜನೆಗೆ 87 ಕೋಟಿ ರೂ., ಯುವನಿಧಿ ಯೋಜನೆಗೆ 0.15 ಕೋಟಿ ರೂ. ಸೇರಿ ಒಟ್ಟು 566.53 ಕೋಟಿ ರೂ. ಮೊತ್ತ ವೆಚ್ಚ ಮಾಡಲಾಗಿದೆ ಎಂದು ಸಚಿವ ಬಿ.ನಾಗೇಂದ್ರ ಅವರು ತಿಳಿಸಿದರು.

ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರೂ ಆದ ಕಂಪ್ಲಿ ಶಾಸಕ ಜೆ.ಎನ್.ಗಣೇಶ್ ಅವರು ಮಾತನಾಡಿ, ಗ್ರಾಮೀಣ ಭಾಗದ ಬಡ ಕುಟುಂಬಗಳಿಗೆ ತಮ್ಮ ಮಕ್ಕಳ ವಿದ್ಯಾಭ್ಯಾಸ ಹಾಗೂ ಇನ್ನಿತರೆ ಖರ್ಚು–ವೆಚ್ಚಗಳನ್ನು ನಿಭಾಯಿಸಲು ಗ್ಯಾರಂಟಿ ಯೋಜನೆಗಳು ಉಪಯುಕ್ತವಾಗಿವೆ. ಮುಂದಿನ ದಿನಗಳಲ್ಲಿ ಕರ್ನಾಟಕ ರಾಜ್ಯವು ಇನ್ನಷ್ಟು ಅಭಿವೃದ್ಧಿಯತ್ತ ಸಾಗಲಿದೆ ಎಂದು ಹೇಳಿದರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿ ಮಾಡಿ, ಅಭಿವೃದ್ಧಿ ಪರ ಯೋಜನೆಗಳನ್ನೂ ಜಾರಿಗೆ ತಂದಿದ್ದಾರೆ ಎಂದು ಹೇಳಿದರು.

ಕಳೆದ ಬಜೆಟ್‌ನಲ್ಲಿ ಬಳ್ಳಾರಿ ಮಹಾನಗರ ಪಾಲಿಕೆಗೆ 200 ಕೋಟಿ ರೂ. ಅನುದಾನ ನೀಡಿದ್ದಾರೆ. ನಗರದಲ್ಲಿ ಹೆಚ್.ಆರ್.ಗವಿಯಪ್ಪ ವೃತ್ತದಿಂದ ಎಪಿಎಂಸಿಯವರೆಗೆ 11 ಕೋಟಿ ರೂ. ವೆಚ್ಚದ ರಸ್ತೆ, 9 ಕೋಟಿ ರೂ. ವೆಚ್ಚದಲ್ಲಿ ಶಾಂತಿನಗರದಿಂದ ಕೊಳಗಳವರೆಗೆ ರಸ್ತೆ, ಜಿಲ್ಲೆಯ 220 ಅಂಗನವಾಡಿ ಕೇಂದ್ರಗಳಿಗೆ ಫ್ರಿಡ್ಜ್ ವಿತರಿಸಲಾಗಿದೆ. ನಗರದ 6,072 ನಿವಾಸಿಗಳಿಗೆ ಪಟ್ಟಾ ವಿತರಿಸಲಾಗುವುದು. ಮುಂಡರಗಿ ಆಶ್ರಯ ಯೋಜನೆಯಡಿ ಮನೆ ಇಲ್ಲದವರಿಗೆ ಮನೆ ನಿರ್ಮಿಸಿಕೊಡಲಾಗುವುದು ಎಂದು ಜಿಲ್ಲೆಯ ಅಭಿವೃದ್ಧಿ ಕಾಮಗಾರಿಗಳ ಚಿತ್ರಣ ಬಿಚ್ಚಿಟ್ಟರು.

ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ:*ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಅವರು, ರಾಯಾಪುರದಿಂದ ಆಂಧ್ರ ಗಡಿಭಾಗದ ರಸ್ತೆ ಅಭಿವೃದ್ಧಿ ಕಾಮಗಾರಿ, ಬೆಳಗಲ್ಲು ಕೆರೆಯಿಂದ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿ, ಮೋಕಾ ಗ್ರಾಮದಲ್ಲಿ ಇ–ಸೇವಾ ಮತ್ತು ಡಿಜಿಟಲ್ ಲೈಬ್ರರಿ ನಿರ್ಮಾಣ ಕಾಮಗಾರಿ, ಹೊಸ ಮೋಕಾ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಬಹು ಉದ್ದೇಶದ ಡೈನಿಂಗ್ ಹಾಲ್ ಒಳಾಂಗಣ ಆಟಗಳ ಆಡಿಟೋರಿಯಂ ಯೋಜನೆಯ ಕಾಮಗಾರಿ, ಬಳ್ಳಾರಿ ತಾಲ್ಲೂಕಿನ ಸಿಂಧುವಾಳ ಗ್ರಾಮದ ಹತ್ತಿರ ಚೆಕ್ ಡ್ಯಾಮ್ ನಿರ್ಮಾಣ ಕಾಮಗಾರಿ ಸೇರಿದಂತೆ ಹಲವು ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದರು.

ಫಲಾನುಭವಿಗಳ ಅನಿಸಿಕೆ:*1. 'ಗೃಹಲಕ್ಷ್ಮಿ ಯೋಜನೆಯ 2 ಸಾವಿರ ಹಣದಿಂದ ಮಕ್ಕಳ ಓದಿನ ಖರ್ಚು, ಔಷಧಿ ಖರ್ಚಿಗೆ, ದಿನಬಳಕೆಯ ಸಾಮಾಗ್ರಿಗಳಿಗೆ ಮತ್ತೆ ಕುಟುಂಬದ ನಿರ್ವಹಣೆಗೆ ಉಪಯೋಗವಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರಿಗೆ ಧನ್ಯವಾದ ತಿಳಿಸುತ್ತೇನೆ.' ಶಕುಂತಲಮ್ಮ, ದಮ್ಮೂರು ಗ್ರಾಮ, ಗೃಹಲಕ್ಷ್ಮಿ ಯೋಜನೆ ಫಲಾನುಭವಿ.

2. 'ಈ ಮುಂಚೆ ದೇವಸ್ಥಾನಗಳಿಗೆ ಹೋಗಲು ಸಾಕಷ್ಟು ಹಣ ಬೇಕಾಗುತ್ತಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರದ ಶಕ್ತಿ ಯೋಜನೆಯ ಉಚಿತ ಬಸ್ ಪ್ರಯಾಣದಿಂದ ನಮ್ಮ ಮನೆಯವರು, ಸ್ನೇಹಿತೆಯರೊಂದಿಗೆ ರಾಜ್ಯದ ಎಲ್ಲಾ ದೇವಸ್ಥಾನಗಳಿಗೆ ಭೇಟಿ ನೀಡಿದ್ದೇನೆ. ತುಂಬಾ ಸಂತೋಷವಾಗಿದೆ. ಇದೇ ಸರ್ಕಾರ ಮುಂದುವರೆಯಲಿ'.
ಅರ್ಕಾಣಿ, ಗೃಹಿಣಿ, ಶಕ್ತಿ ಯೋಜನೆ ಫಲಾನುಭವಿ.

ಬಳಿಕ ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡ ಫಲಾನುಭವಿಗಳಿಗೆ ಸಾಂಕೇತಿಕವಾಗಿ ಚೆಕ್ ವಿತರಣೆ ಮಾಡಿದರು. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಳ ಅಭಿವೃದ್ಧಿ ನಿಗಮದ ವತಿಯಿಂದ ಫಲಾನುಭವಿಗಳಿಗೆ ದ್ವಿಚಕ್ರ ವಾಹನಗಳ ವಿತರಣೆ ಮಾಡಿದರು. ಅತ್ಯುತ್ತಮ ಸೇವೆಗೈದ ಅಂಗನವಾಡಿ ಕಾರ್ಯಕರ್ತೆಯರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಂಡೂರು ಶಾಸಕ ಈ.ತುಕಾರಾಂ, ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ, ಮಹಾನಗರ ಪಾಲಿಕೆ ಮೇಯರ್ ಬಿ.ಶ್ವೇತ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಪಾಲಿಕೆಯ ಉಪ ಮೇಯರ್ ಬಿ.ಜಾನಕಿ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಸಹಾಯಕ ಆಯುಕ್ತ ಹೇಮಂತ್, ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಮಹಾನಗರ ಪಾಲಿಕೆ ಸದಸ್ಯರು, ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

### * ಆನೆಗೊಂದಿ ಉತ್ಸವ: ಗತಕಾಲದ ಸಂಸ್ಕೃತಿ, ಪರಂಪರೆಯ ಮೆಲುಕು * ಮೆರವಣಿಗೆಯ ಮೆರಗು ಹೆಚ್ಚಿಸಿದ ಅಂಬಾರಿ* ವಿಜ್ರಂಭಣೆಯ ಮೆರವಣಿಗೆಗೆ ಗಂಗಾವತಿ ಶಾಸಕರಿಂದ ಚಾಲನೆ

## ಆನೆಗೊಂದಿಯ ಗತ ವೈಭವಕ್ಕೆ ಸಾಕ್ಷಿಯಾದ ಭವ್ಯ ಮೆರವಣಿಗೆ





ಕೊಪ್ಪಳ ಮಾರ್ಚ್ 11: ಐತಿಹಾಸಿಕ ವಿಶ್ವ ವಿಖ್ಯಾತ ವಿಜಯನಗರ ಸಾಮ್ರಾಜ್ಯದ ತೊಟ್ಟಿಲು ಆನೆಗೊಂದಿ ಉತ್ಸವ–2024ರ ಅಂಗವಾಗಿ ಶ್ರೀ ಆದಿಶಕ್ತಿ ದುರ್ಗಾದೇವಿ ದೇವಸ್ಥಾನದಿಂದ ಗಗನ್ ಮಹಲ್‌ವರೆಗೆ ಭವ್ಯ ಮೆರವಣಿಗೆ ಮಾರ್ಚ್ 11ರಂದು ಭವ್ಯ ಮೆರವಣಿಗೆ ನಡೆಯಿತು.

ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ ಅವರು ಅಂಬಾರಿಯಲ್ಲಿನ ಶ್ರೀ ಆದಿಶಕ್ತಿ ದುರ್ಗಾದೇವಿ ಮೂರ್ತಿಗೆ ಪುಷ್ಪಾರ್ಪಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆಯು ಆನೆಗೊಂದಿಯ ಗತಕಾಲದ ಸಂಸ್ಕೃತಿ, ಪರಂಪರೆಯ ಮೆಲುಕು ಹಾಕುವ ರೀತಿಯಲ್ಲಿ ವಿಜ್ರಂಭಣೆಯಿಂದ ನಡೆಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ, ಕೊಪ್ಪಳ ಉಪವಿಭಾಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಉತ್ಸವದ ಮೆರವಣಿಗೆ ಸಮಿತಿ ಅಧ್ಯಕ್ಷರು ಆಗಿರುವ ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಹಳ್ಳಿ ಗಂಗಾವತಿ ತಹಶೀಲ್ದಾರರಾದ ಯು.ನಾಗರಾಜ, ತಾಲ್ಲೂಕು ಪಂಚಾಯತ್ ಇಓ ಲಕ್ಷ್ಮೀ ದೇವಿ ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಗಮನ ಸೆಳೆದ ಕೋಲಾಟ ಪ್ರದರ್ಶನ: ಆನೆಗೊಂದಿ ಉತ್ಸವದ ಮೆರವಣಿಗೆಯಲ್ಲಿ ಆಕರ್ಷಕ ಕೋಲಾಟ ಪ್ರದರ್ಶನ ನಡೆಯಿತು. ಶಾಸಕರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓ ಹಾಗೂ ಇತರ ಅಧಿಕಾರಿಗಳು ಕೋಲಾಟ ಆಡುವುದರ ಮೂಲಕ ಸಾರ್ವಜನಕರ ಗಮನ ಸೆಳೆದರು. ಮೆರವಣಿಗೆಯ ಮೆರಗು ಹೆಚ್ಚಿಸಿದ ಆನೆ ಅಂಬಾರಿ: ಆನೆಗೊಂದಿ ಉತ್ಸವದ ಮೆರವಣಿಗೆಯಲ್ಲಿ ಶ್ರೀ ಆದಿಶಕ್ತಿ ದುರ್ಗಾದೇವಿ ಮೂರ್ತಿಯನ್ನು ಹೊತ್ತ ಅಂಬಾರಿಯು ಮೆರವಣಿಗೆಯ ಮೆರಗನ್ನು ಹೆಚ್ಚಿಸಿತು. ಅಂಬಾರಿಯನ್ನು ಹೊತ್ತ ಆನೆಯ ಹೆಸರು ಲಕ್ಷ್ಮೀ. ಈ ಆನೆಯು ಪಕ್ಕದ ವಿಜಯನಗರ ಜಿಲ್ಲೆಯ ಹಂಪಿ ವಿರೂಪಾಕ್ಷೇಶ್ವರ ಸನ್ನಿಧಿಗೆ ಸೇರಿದ್ದು, ಇತ್ತೀಚೆಗೆ ನಡೆದ ಕನಕಗಿರಿ ಉತ್ಸವವದಲ್ಲಿಯೂ ಪಾಲ್ಗೊಂಡು ಗಮನ ಸೆಳೆದಿತ್ತು. ಈಗ ಮತ್ತೆ ಆನೆಗೊಂದಿ ಉತ್ಸವಕ್ಕಾಗಿ ನಮ್ಮ ಕೊಪ್ಪಳ ಜಿಲ್ಲೆಗೆ ಆಗಮಿಸಿದ್ದು ವಿಶೇಷವಾಗಿದೆ. ವಿವಿಧ ಕಲಾ ಪ್ರಕಾರಗಳ ಪ್ರದರ್ಶನ



ಆಕರ್ಷಣೀಯ: ಆನೆಗೊಂದಿಯ ಉತ್ಸವದ ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ನಂದಿ ಧ್ವಜ ಸಮಾಳ ವಾದನ, ಕಹಳೆ ವಾದನ, ಕರಡಿ ಮಜಲು, ಹಲಗೆ ವಾದನ, ಮಹಿಳಾ ವೀರಗಾಸೆ, ಗೊರವರ ಕುಣಿತ, ಪೂಜಾ ಕುಣಿತ, ಜಗ್ಗಲಿಗೆ, ಮಹಿಳಾ ಡೊಳ್ಳು ಕುಣಿತ, ಹಗಲುವೇಳ, ಮೋಜಿನಗೊಂಬೆ, ಮಹಿಳಾ ತಮಟೆ ವಾದನ, ಕೀಲುಕುದುರೆ, ನಾಸಿಕ್ ಡೊಲ್, ನಗಾರಿ, ಗಾರುಡಿ ಗೊಂಬೆ, ಸೋಮನ ಕುಣಿತ, ಕಂಸಾಳೆ, ಲಂಬಾಣಿ ನೃತ್ಯ, ಹುಲಿವೇಳ, ಕೋಳಿ ನೃತ್ಯ, ಬೇಡರ ಪಡೆ, ಡ್ರಮ್ ವಾದನ, ಮಹಿಳಾ ಡೊಳ್ಳು, ಮಹಿಳಾ ಕೋಲಾಟ, ಮರಗಾಲು, ಹಗಲುವೇಳ, ಚಿಲಿಪಿಲಿಗೊಂಬೆ, ಪಟ ಕುಣಿತ, ವೀರಗಾಸೆ, ಚಂಡೆ ವಾದನ, ಕರಡಿ ಮಜಲು, ಯಕ್ಷಗಾನ ಕುಣಿತ, ಮೋಜಿನ ಗೊಂಬೆ, ಲೇಜಿಮ್ ನೃತ್ಯ ಹಾಗೂ ಇತರ ಕಲೆಗಳ ಪ್ರದರ್ಶನವು ಆಕರ್ಷಣೀಯವಾಗಿತ್ತು.